# Akashvani : Bangalore
# Regional Bulletin In Kannada
# 11.11.2024 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಭಾರತ್ ಬ್ರ್ಯಾಂಡ್ ಉತ್ಪನ್ನಗಳ ಎರಡನೇ ಹಂತದ ಮಾರಾಟಕ್ಕೆ ಹುಬ್ಬಳ್ಳಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ
- ವಿಧಾನಸಭಾ ಉಪಚುನಾವಣೆ; ಇಂದು ಸಂಜೆ ಬಹಿರಂಗ ಪ್ರಚಾರ ಅಂತ್ಯ
- ಚನ್ನಪಟ್ಟಣ, ಶಿಗ್ಗಾಂವಿ, ಸಂಡೂರಿನಲ್ಲಿ ಅಭ್ಯರ್ಥಿಗಳಿಂದ ಬಿರುಸಿನ ಮತಯಾಚನೆ
- ರಾಜ್ಯದೆಲ್ಲೆಡೆ ಇಂದು ಒನಕೆ ಓಬವ್ವ ಜಯಂತಿ ಆಚರಣೆ
- ಮೈಸೂರಿನಲ್ಲಿ ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿ; ನಾಳೆ ಪುರುಷರ ಫೈನಲ್ ಹಣಾಹಣಿ

**<><*<><>*><>**

ಕೇಂದ್ರ ಸರ್ಕಾರ ರೈತರ ಮತ್ತು ಬಡವರ ಹಿತ ಕಾಯಲು ಬದ್ಧವಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ ಮತ್ತು ನಾಗರಿಕ ಪೂರೈಕೆ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಪರಿಹಾರವಾಗಿ ಹುಬ್ಬಳ್ಳಿ ಧಾರವಾಡ ಅವಳಿ ನಗರದಲ್ಲಿ ಭಾರತ್ ಬ್ರ್ಯಾಂಡ್ ಉತ್ಪನ್ನಗಳ ಎರಡನೇ ಹಂತದ ಮಾರಾಟಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಭಾರತ್ ಬ್ರ್ಯಾಂಡ್‌ನ ಅಕ್ಕಿ, ಗೋದಿ ಹಿಟ್ಟು, ಬೇಳೆಗಳು ಮುಂತಾದ ಅಗತ್ಯ ವಸ್ತುಗಳು ಅತೀ ಕಡಿಮೆ ದರದಲ್ಲಿ ಸಾರ್ವಜನಿಕರಿಗೆ ಲಭ್ಯವಿದ್ದು, ಈ ಯೋಜನೆಯನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕೆಂದು ಕರೆ ನೀಡಿದ್ದಾರೆ.

ಧ್ವನಿ: ಪ್ರಲ್ಹಾದ್ ಜೋಶಿ, ಕೇಂದ್ರ ಸಚಿವ

ಹುಬ್ಬಳ್ಳಿಯ ಮೂರು ಸಾವಿರ ಮಠದ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ೫೦ಕ್ಕೂ ಹೆಚ್ಚು ವಾಹನಗಳಿಗೆ ಚಾಲನೆ ನೀಡಲಾಗಿದ್ದು, ನೆರೆದಿದ್ದ ಮಹಿಳೆಯರಿಗೆ ಉತ್ಪನ್ನಗಳನ್ನು ಅಗ್ಗದ ಬೆಲೆಯಲ್ಲಿ ವಿತರಿಸಲಾಯಿತು. ಭಾರತ್ ಉತ್ಪನ್ನ ಖರೀದಿಸಿದ ಗ್ರಾಹಕರು ಸಂತಸ ವ್ಯಕ್ತಪಡಿಸಿದ್ದಾರೆ. ಭಾರತ್ ಅಕ್ಕಿ ೩೪ ರೂಪಾಯಿ, ಗೋಧಿ ಹಿಟ್ಟು ೩೦, ಕಡಲೆ ಬೇಳೆ ೭೦, ಹೆಸರು ಬೇಳೆ ೧೦೭ ರೂಪಾಯಿಗೆ ರಿಯಾಯಿತಿ ದರದಲ್ಲಿ ದೊರೆಯಲಿದೆ.

**<><*<><>*><>**

ಶಿಗ್ಗಾಂವಿ, ಚನ್ನಪಟ್ಟಣ, ಸಂಡೂರು ವಿಧಾನಸಭಾ ಕ್ಷೇತ್ರಗಳ ಉಪಚುಣಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ೬ ಗಂಟೆಗೆ ತೆರೆ ಬೀಳಲಿದೆ. ನಾಳೆ ಅಭ್ಯರ್ಥಿಗಳು ಮನೆ ಮನೆಗೆ ತೆರಳಿ ಮತಯಾಚಿಸಲಿದ್ದಾರೆ. ನವೆಂಬರ್ ೧೩ ರಂದು ಮತದಾನ ನಡೆಯಲಿದೆ. ಅಂದು ಮೂರು ಕ್ಷೇತ್ರಗಳ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಹಾವೇರಿಯಲ್ಲಿ ಚುನಾವಣೆಗೆ ಸಂಬಂಧಿಸಿದಂತೆ ಸಕಲ ಸಿದ್ಧತೆಗಳನ್ನು ಜಿಲ್ಲಾಡಳಿತ

ಕೈಗೊಂಡಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ವಿಜಯಮಹಾಂತೇಶ, ಜಿಲ್ಲಾಧಿಕಾರಿ

ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ವಿಧಾನಸಭಾ ಕ್ಷೇತ್ರದ ಹೊರಗಿನವರು ಇಂದು ಸಂಜೆ ಕ್ಷೇತ್ರದಿಂದ ಹೊರ ನಡೆಯುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ ಹೊರಡಿಸಿದ್ದಾರೆ. ನಾಡಿದ್ದು ಬೆಳಿಗ್ಗೆ ೭ ಗಂಟೆಯಿಂದ ಸಂಜೆ ೬ ಗಂಟೆಯವರೆಗೆ ಮತದಾನ ನಡೆಯಲಿದೆ ಎಂದು ತಿಳಿಸಿದ್ದಾರೆ. ಶಿಗ್ಗಾಂವಿಯಲ್ಲಿಯೂ ಉಪಚುನಾವಣೆಯ ಮತದಾನಕ್ಕೆ ಜಿಲ್ಲಾಡಳಿತ ಎಲ್ಲ ಸಿದ್ಧತೆ ಕೈಗೊಂಡಿದೆ.

<><*<><>*><>

ವಿಧಾನಸಭೆ ಉಪಚುನಾವಣೆಯ ಬಹಿರಂಗ ಪ್ರಚಾರಕ್ಕೆ ಅಂತಿಮ ದಿನವಾದ ಇಂದು ಎಲ್ಲಾ ಪಕ್ಷಗಳ ಅಭ್ಯರ್ಥಿಗಳು ಹಾಗೂ ನಾಯಕರು ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ. ಚನ್ನಪಟ್ಟಣ ನಗರದ ರೈಲ್ವೆ ನಿಲ್ದಾಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಚುನಾವಣಾ ಪ್ರಚಾರ ನಡೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಅಭ್ಯರ್ಥಿ ಯೋಗೇಶ್ವರ್ ಪರ ಪ್ರಚಾರ ಸಭೆ ನಡೆಸಿ ಚೆನ್ನಪಟ್ಟಣದಲ್ಲಿ ಮತಯಾಚಿಸುತ್ತಿದ್ದಾರೆ. ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪತ್ನಿ ರೇವತಿ ನಿಖಿಲ್ ಕುಮಾರಸ್ವಾಮಿ ಚನ್ನಪಟ್ಟಣದ ರೈಲು ನಿಲ್ದಾಣದ ಬಳಿ ಇಂದು ಮತಯಾಚನೆ ಮಾಡಿದರು. ಹಾವೇರಿ ಜಿಲ್ಲೆ ಶಿಗ್ಗಾಂವಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹ್ಮದಖಾನ್ ಪಠಾಣ ಪರವಾಗಿ ಶಿಗ್ಗಾಂವಿಯಲ್ಲಿಂದು ಸಚಿವ ಶಿವಾನಂದ ಪಾಟೀಲ, ಶಾಸಕ ರುದ್ರಪ್ಪ ಲಮಾಣಿ, ವಿಧಾನ ಪರಿಷತ್ ಸದಸ್ಯ ಪ್ರಕಾಶ ರಾಥೋಡ್ ಪ್ರಚಾರ ನಡೆಸಿದರು. ಇನ್ನೊಂದೆಡೆ ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ ಪರವಾಗಿ ಕೇಂದ್ರ ಸಚಿವ ಪ್ರಲ್ಹಾದ್ , ಸಂಸದ ಬಸವರಾಜ ಬೊಮ್ಮಾಯಿ ಪ್ರಚಾರ ನಡೆಸಿದರು. ಸಂಡೂರಿನಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಹಾಗೂ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತು ಕೊನೆಯ ಹಂತದ ಪ್ರಚಾರದಲ್ಲಿ ನಿರತರಾಗಿದ್ದಾರೆ.

<><*<><>*><>

ಕೋಟೆ ನಾಡು ಚಿತ್ರದುರ್ಗದಲ್ಲಿ ಓಬವ್ವ ಜಯಂತಿ ಅದ್ದೂರಿಯಾಗಿ ನಡೆಯಿತು. ಕನ್ನಡ ಸಂಸ್ಕೃತಿ ಇಲಾಖೆ ಜಿಲ್ಲಾಡಳಿತ ಮತ್ತು ನಗರಸಭೆ ವತಿಯಿಂದ ಆಯೋಜಿಸಲಾದ ಮೆರವಣಿಗೆಗೆ ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಚಾಲನೆ ನೀಡಿದರು. ಓಬವ್ವನ ನಾಡಿನಲ್ಲಿ ನಡೆದ ಮೆರವಣಿಗೆಯಲ್ಲಿ ಗ್ರಾಮೀಣ ಸಂಸ್ಕೃತಿಕ ಕಲಾತಂಡಗಳು ಭಾಗವಹಿಸಿದ್ದವು. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಒನಕೆ ಓಬವ್ವ ಜಯಂತಿಗೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒನಕೆ ಓಬವ್ವ ಮಹಿಳೆಯರಿಗೆ ಸ್ಫೂರ್ತಿಯ ಚಿಲುಮೆ. ಅಪಾಯದ ಸಂದರ್ಭದಲ್ಲಿ ಸಮಾಜವನ್ನು ಹೇಗೆ ರಕ್ಷಿಸಬೇಕು ಎನ್ನುವುದಕ್ಕೆ ಓಬವ್ವ ದಂತ ಕತೆಯಾಗಿದ್ದಾರೆ ಎಂದು ಬಣ್ಣಿಸಿದರು.

<><*<><>*><>

ಗ್ಯಾರಂಟಿ ಯೋಜನೆ ನಿಲ್ಲಿಸಲು ಬಿಜೆಪಿ ಹುನ್ನಾರ ನಡೆಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಉಪಚುನಾವಣೆ ಬಳಿಕ ಗೃಹಲಕ್ಷ್ಮೀ ಯೋಜನೆ ನಿಲ್ಲಲಿದೆ ಎಂಬ ಮಾಜಿ ಪ್ರಧಾನಿ ದೇವೇಗೌಡರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಈ ಯೋಜನೆಯನ್ನು ನಿಲ್ಲಿಸಲು ಬಿಜೆಪಿ ಹಾಗೂ ಜೆಡಿಎಸ್ ಯತ್ನಿಸುತ್ತಿದೆ ಎಂದು ದೂರಿದ್ದಾರೆ. ಉಪಚುನಾವಣೆಯಲ್ಲಿ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<><>*><>

ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಾಡಿದ್ದು, ಮತದಾನ ನಡೆಯಲಿದೆ.  ಉಪಚುನಾವಣೆ ನಡೆಯುವ ೩ ವಿಧಾನಸಭಾ ಕ್ಷೇತ್ರಗಳ ಅಭ್ಯರ್ಥಿಯ ಸಮಗ್ರ ಚಿತ್ರಣವನ್ನು ಒದಗಿಸುವ 'ಅಭ್ಯರ್ಥಿ ಪರಿಚಯ' ವನ್ನು  ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾ ವರದಿಗಾರರು ಸಿದ್ಧಪಡಿಸಿದ್ದಾರೆ. ಈಗ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳ ವಿವರ : ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ  ಜಿಲ್ಲಾ ಪ್ರತಿನಿಧಿ ಮಂಜುನಾಥ ಗುಡಿಸಾಗರ. ಬಿಜೆಪಿ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಳೆದ ೧೬ ವರ್ಷಗಳಿಂದ ಪ್ರತಿನಿಧಿಸುತ್ತಿದ್ದ ಕ್ಷೇತ್ರ ಶಿಗ್ಗಾಂವಿ. ಬೊಮ್ಮಾಯಿ ಸಂಸದರಾಗಿ ಆಯ್ಕೆಯಾದ ನಂತರ ತೆರವಾದ ಸ್ಥಾನಕ್ಕೆ ಉಪಚುನಾವಣೆ ನಡೆಯುತ್ತಿದ್ದು, ಈ ಬಾರಿಯ ಉಪಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿಯಿಂದ ಭರತ್ ಬೊಮ್ಮಾಯಿ, ಕಾಂಗ್ರೆಸ್ ನಿಂದ  ಪಠಾಣ್ ಯಾಸೀರ್ ಅಹ್ಮದಖಾನ್ ಪ್ರಮುಖವಾಗಿ ಕಣದಲ್ಲಿರುವ ಅಭ್ಯರ್ಥಿಗಳು. ಇವರಲ್ಲದೆ ಸೋಸಿಯಾಲಿಸ್ಟ್ ಪಾರ್ಟಿಯಿಂದ  ಖಾಜಾಮೊಹಿದ್ದೀನ್ ಗುಡಗೇರಿ, ಕರ್ನಾಟಕ ರಾಷ್ಟ್ರ ಸಮಿತಿಯಿಂದ ರವಿ ಕೃಷ್ಣಾರೆಡ್ಡಿ, ಪಕ್ಷೇತರ ಅಭ್ಯರ್ಥಿಗಳಾಗಿ ಡಾ.ಜಿ.ಹೆಚ್. ಇಮ್ರಾಪೂರ, ಶಿದ್ದಪ್ಪ ಹೊಸಳ್ಳಿ, ಎಸ್.ಎಸ್.ಪಾಟೀಲ್ ಮತ್ತು ಸಾತಪ್ಪ ನೀಲಪ್ಪ ದೇಸಾಯಿ ಅವರು ಚುನಾವಣಾ ಕಣದಲ್ಲಿದ್ದಾರೆ. ಉಪಚುನಾವಣೆಯಲ್ಲಿ ಎಂಟು ಅಭ್ಯರ್ಥಿಗಳು ಕಣದಲ್ಲಿ ಇದ್ದರೂ ಬಿಜೆಪಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ನಡುವೆ ನೇರ ಪೈಪೋಟಿ ಏರ್ಪಟ್ಟಿದೆ. ಬಿಜೆಪಿಯಿಂದ ಆಯ್ಕೆ ಬಯಸಿರುವ ಭರತ್ ಬೊಮ್ಮಾಯಿ ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಪುತ್ರ ಹಾಗೂ ಮಾಜಿ ಮುಖ್ಯಮಂತ್ರಿ ಎಸ್ ಆರ್ ಬೊಮ್ಮಾಯಿ ಅವರ ಮೊಮ್ಮಗ. ಅಮೆರಿಕದಲ್ಲಿ ಬ್ಯಾಚುಲರ್ ಆಫ್ ಇಂಜಿನಿಯರಿಂಗ್ ಪದವಿ ಪೂರ್ಣಗೊಳಿಸಿ ಸಿಂಗಾಪುರದ ಮ್ಯಾನೇಜ್ಮೆಂಟ್ ಯುನಿವರ್ಸಿಟಿಯಿಂದ ೨೦೧೪ ರಲ್ಲಿ ಎಂಬಿಎ ಪದವಿ ಪಡೆದಿದ್ದಾರೆ. ಎಂಬಿಎ ಪದವಿ ಬಳಿಕ ಕೆಲ ದಿನಗಳ ಕಾಲ ವಿದೇಶದಲ್ಲೇ ಇದ್ದು ನಂತರ ಭಾರತಕ್ಕೆ ಬಂದು ಭರತ್ ಉದ್ಯಮದಲ್ಲಿ ತೊಡಗಿಕೊಂಡಿದ್ದಾರೆ. ೨೦೨೩ರ ವಿಧಾನಸಭಾ ಚುನಾವಣೆಯಲ್ಲಿ ತಂದೆ ಬಸವರಾಜ ಬೊಮ್ಮಾಯಿ ಪರ ಶಿಗ್ಗಾವಿ ಕ್ಷೇತ್ರದಲ್ಲಿ ಪ್ರಚಾರ ಮಾಡಿದ್ದ ಭರತ್ ೨೦೨೪ ಲೋಕಸಭಾ ಚುನಾವಣೆ ತಂದೆಯ ಪರ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಓಡಾಡಿದ್ದರು. ಈಗ ಮೊದಲ ಬಾರಿ ರಾಜಕೀಯ ಅಖಾಡಕ್ಕೆ ಧುಮುಕಿರುವ ಅವರು ಮೊದಲ ಬಾರಿ ಅದೃಷ್ಟ ಪರೀಕ್ಷೆ ಎದುರಿಸುತ್ತಿದ್ದಾರೆ. ಇನ್ನೂ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ಅಹ್ಮದ್ ಖಾನ್ ಪಠಾಣ್ ಮೂಲತಃ ಹಾನಗಲ್ ತಾಲೂಕಿನ ಬೊಮ್ಮನಳ್ಳಿಯವರು.. ತಂದೆ ಮಹಮ್ಮದ್ ಖಾನ್ ಪಠಾಣ್ ೧೯೮೭ ರಿಂದ ೧೯೯೨ ರವರೆಗೆ ಧಾರವಾಡ ಜಿಲ್ಲಾ ಪರಿಷತ್ ವಿರೋಧ ಪಕ್ಷದ ನಾಯಕರಾಗಿದ್ದವರು. ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಬಿ.ಎ ಪದವಿ ಪಡೆದಿರುವ ಇವರು ಶಿಗ್ಗಾವಿಯಲ್ಲಿ ಹೋಟೆಲ್ ಉದ್ಯಮ ಆರಂಭಿಸಿ ನಂತರದ ದಿನಗಳಲ್ಲಿ ಕಾಂಗ್ರೆಸ್ ಕಿಸಾನ್ ಘಟಕದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ ಪಕ್ಷದಲ್ಲಿ ಗುರುತಿಸಿಕೊಂಡು ಪಕ್ಷ ಸಂಘಟನೆ ಮಾಡಿದ್ದರು. ೨೦೨೩ರ ವಿಧಾನಸಭೆ ಚುನಾವಣೆ ವೇಳೆ ಅನಿರೀಕ್ಷಿತವಾಗಿ ಯಾಸೀರ್ ಅಹ್ಮದ್ ಪಠಾಣ್ ಅವರನ್ನು ಕಾಂಗ್ರೆಸ್

ಅಭ್ಯರ್ಥಿಯಾಗಿ ಘೋಷಿಸಿ ಕಣಕ್ಕೆ ಇಳಿಸಿತು. ಬಸವರಾಜ ಬೊಮ್ಮಾಯಿ ವಿರುದ್ಧ ಪಠಾಣ ೩೫ ಸಾವಿರ ೯೭೮ ಮತಗಳ ಅಂತರದಿಂದ ಪರಾಜಿತಗೊಂಡಿದ್ದರು. ಸೋಲಿನ ನಂತರ ಸುಮ್ಮನಾಗದೆ ಕ್ಷೇತ್ರದಲ್ಲಿ ಬೂತ್ ಮಟ್ಟದಿಂದಲೇ ಪಕ್ಷ ಸಂಘಟನೆಗಾಗಿ ದುಡಿದರು. ಇದೀಗ ಕಾಂಗ್ರೆಸ್ ಅಭ್ಯಥಿಯಾಗಿ ಉಪಚುನಾವಣೆಯಲ್ಲಿ ಅದೃಷ್ಟ ಪರೀಕ್ಷಿಸುತ್ತಿದ್ದಾರೆ.

<><*<><>*><>

ಮೈಸೂರಿನ ಚಾಮುಂಡಿ ವಿಹಾರ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೂರು ದಿನಗಳ ೩೮ನೇ ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ವಿವಿಧ ರಾಜ್ಯಗಳ ೨೦ ಪುರುಷರ ಮತ್ತು ೧೭ ಮಹಿಳಾ ತಂಡಗಳು ಭಾಗವಹಿಸಿವೆ. ಮೊದಲ ದಿನವಾದ ನಿನ್ನೆ ಪ್ರೀ ಕ್ವಾರ್ಟರ್ ಫೈನಲ್ಸ್ ಪಂದ್ಯಾವಳಿಗಳು ನಡೆದಿದ್ದು, ಪುರುಷರ ವಿಭಾಗದಲ್ಲಿ ೧೦ ಪಂದ್ಯಗಳು ಮತ್ತು ಮಹಿಳೆಯರ ವಿಭಾಗದಲ್ಲಿ ೯ ಪಂದ್ಯಗಳು ನಡೆದವು. ಪುರುಷರ ವಿಭಾಗದ ಟೀಮ್ ಚಾಂಪಿಯನ್ ಶಿಪ್‌ನಲ್ಲಿ, ಜಾರ್ಖಂಡ್ ತಂಡವು ಜಮ್ಮು ಕಾಶ್ಮೀರ ತಂಡವನ್ನು ೩-೦, ಹರಿಯಾಣ ತಂಡ ಪಶ್ಚಿಮಬಂಗಾಳದ ವಿರುದ್ಧ  ೩-೧, ಕೇರಳ ತಂಡ ರಾಜಸ್ಥಾನ ವಿರುದ್ಧ ೩-೧, ಮಹಾರಾಷ್ಟ್ರ ತಂಡ ಉತ್ತರಾಖಂಡ ವಿರುದ್ಧ ೩-೦, ಒಡಿಸ್ಸಾ ತಂಡ ಅಸ್ಸಾಂ ವಿರುದ್ಧ ೩-೨, ಜಾರ್ಖಂಡ್ ತಂಡ ಕರ್ನಾಟಕ ವಿರುದ್ಧ ೩-೧, ಅಂತರದಿಂದ ಪರಾಭಾವಗೊಳಿಸಿತು. ನಾಳೆ ಪುರುಷರ ಫೈನಲ್ ಪಂದ್ಯಗಳು ನಡೆಯಲಿವೆ. ಮಹಿಳೆಯರ ವಿಭಾಗದ ಟೀಮ್ ಚಾಂಪಿಯನ್ ಶಿಪ್‌ನಲ್ಲಿ, ಗುಜರಾತ್ ತಂಡ ಕರ್ನಾಟಕವನ್ನು ೨-೧ ಅಂತರದಿಂದ ಪರಾಭವಗೊಳಿಸಿತು. ಇಂದು ಕ್ವಾರ್ಟರ್ ಫೈನಲ್ಸ್ ಪಂದ್ಯಗಳು ನಡೆಯಲಿವೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>